ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ತು ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ ದಿನಾಂಕ : DATE : 23/07/2019

# ಆರಂಭವಾದ 10 ನಿಮಿಷದಲ್ಲೇ ಮೇಲ್ಮನೆ ಕಲಾಪ ಮುಂದೂಡಿಕೆ

ಕ.ಪ್ರ 23/7/19

## ಬಿಜೆಪಿ ಧರಣಿಗೆ ವಿಧಾನಪರಿಷತ್ ಕಲಾಪ ಬಲಿ



ಬೆಂಗಳೂರು: ಅಲ್ಪಮತಕ್ಕೆ ಕುಸಿದಿರುವ ಮೈತ್ರಿ ಸರ್ಕಾರ ಅಧಿಕಾರದಿಂದ ನಿರ್ಗಮಿಸಬೇಕು. ಇಲ್ಲವೇ ಬಹುಮತ ಸಾಬೀತುಪಡಿಸಬೇಕು ಎಂದು ಒತ್ತಾಯಿಸಿ ಬಿಜೆಪಿ ಸದಸ್ಯರು ಸದನದಲ್ಲಿ ಧರಣಿ ಮುಂದುವರೆಸಿದ ಪರಿಣಾಮ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ಅವರು ವಿಧಾನಪರಿಷತ್ ಕಲಾಪವನ್ನು ಮಂಗಳವಾರಕ್ಕೆ ಮುಂದೂಡಿದರು.

ಸೋಮವಾರ ಮಧ್ಯಾಹ್ನ 1 ಗಂಟೆಗೆ ವಿಧಾನಪರಿಷತ್ ಕಲಾಪ ಆರಂಭಗೊಂಡಿತು. ಬಳಿಕ ಕೇವಲ 10 ನಿಮಿಷದೊಳಗೆ ಕಲಾಪವನ್ನು ಮಂಗಳವಾರ ಬೆಳಗ್ಗೆ 11.30ಕ್ಕೆ ಮುಂದೂಡಲಾಯಿತು. ವಿಧಾನಪರಿಷತ್ ಕಲಾಪ ಆರಂಭಗೊಳ್ಳುತ್ತಿದ್ದಂತೆ ಬಿಜೆಪಿ ಸದಸ್ಯರು ಸದನದ ಬಾವಿಗೆ ಇಳಿದು ಧರಣಿ ಮುಂದುವರೆಸಿದರು. ಸರ್ಕಾರದ ವಿರುದ್ಧ ಘೋಷಣೆಗಳುಳ್ಳ ಫಲಕಗಳನ್ನು ಹಿಡಿದು ಧಿಕ್ಕಾರ ಕೂಗಿ ಕಲಾಪಕ್ಕೆ ಅಡ್ಡಿಯುಂಟು ಮಾಡಿದರು. ಮುಖ್ಯಮಂತ್ರಿ, ಎಚ್.ಡಿ.ಕುಮಾರಸ್ವಾಮಿ ರಾಜೀನಾಮೆಗೆ ಒತ್ತಾಯಿಸಿ ಘೋಷಣೆಗಳನ್ನು ಕೂಗಿದರು. ಗದ್ದಲದ ನಡುವೆಯೇ ಪೂರಕ ಪಟ್ಟಿಯಲ್ಲಿ ಇದ್ದ ಚುನಾವಣಾ ಪ್ರಸ್ತಾಪಗಳನ್ನು ಸದನದಲ್ಲಿ ಮಂಡಿಸಿದ ನಂತರ ಕಲಾಪವನ್ನು ಸಭಾಪತಿ ಅವರು ಮಂಗಳವಾರ ಬೆಳಗ್ಗೆ 11.30ಕ್ಕೆ ಮುಂದೂಡಿದರು.

11